ಸಂಪಾದಕರು: ರವಿಕುಮಾರ್ ಸಿ.ಹೆಚ್.

ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SURYAPRAGATHI Kannada Daily

ಪ್ರತಿ ಸುದ್ಧಿಯ ಧ್ವನಿ

suryapragathi2021@gmail.com Mob: 9901010109 RNI:KARKAN/2021/80805 L2/RNP-1285/TMR/2025-27

Volume: 05 Issue:70
ಸಂಪುಟ: 05 ಸಂಚಿಕೆ: 70
Date:27-03-2026 Friday
RNI NO : KARKAN/2021/80805 L2/RNP-1285/TMR/2025-27
Page :4 ಪುಟ : 4
Price: 1.00 ಬೆಲೆ: 1.00 ರೂ

# ಸದನದಲ್ಲೂ ಐಪಿಎಲ್ ಟಿಕೆಟ್ ಬಗ್ಗೆ ಚರ್ಚೆ: ಮ್ಯಾಚ್ ಟಿಕೆಟ್‌ಗಾಗಿ ಸರ್ಕಾರವನ್ನು ಬೇಡಿದ ಶಾಸಕರು!

ಇಂಡಿಯನ್ ಪ್ರಿಮಿಯರ್ ಲೀಗ್(ಐಪಿಎಲ್ 2026) ಉದ್ಘಾಟನೆ 28ರಂದು ಬೆಂಗಳೂರಿನ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ನಡೆಯಲಿದ್ದು, ಆರ್‌ಸಿಬಿ ಹಾಗೂ ಸನ್ ರೈಸರ್ಸ್ ಹೈದರಾಬಾದ್ ನಡುವೆ ಉದ್ಘಾಟನಾ ಪಂದ್ಯ ನಡೆಯಲಿದೆ. ಹೀಗಾಗಿ ಎಲ್ಲಾ ಸಿದ್ಧತೆಗಳು ನಡೆದಿದ್ದು, ಇನ್ನೊಂದೆಡೆ ಐಪಿಎಲ್ ಟಿಕೆಟ್‌ಗೆ ಬೇಡಿಕೆ ಹೆಚ್ಚಾಗಿದೆ. ಈ ಸಂಬಂಧ ಇತ್ತ ಬಜೆಟ್ ಅಧಿವೇಶನದಲ್ಲೂ ಸಹ ಐಪಿಎಲ್ ಟಿಕೆಟ್ ಬಗ್ಗೆ ಬಿಸಿಬಿಸಿ ಚರ್ಚೆ ಆಗಿದೆ.

ಇದೇ ಮಾರ್ಚ್ 28ರಿಂದ ಐಪಿಎಲ್ ಹಬ್ಬ ಶುರುವಾಗಲಿದ್ದು, ಬೆಂಗಳೂರಿನ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿಉದ್ಘಾಟನಾ ಪಂದ್ಯದಲ್ಲಿ ಹಾಲಿ ಚಾಂಪಿಯನ್ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಸನ್‌ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಲಿವೆ. ಇನ್ನೊಂದೆಡೆ ಐಪಿಎಲ್ ಟಿಕೆಟ್ ಗೆ ಬೇಡಿಕೆ ಹೆಚ್ಚಾಗಿದೆ. ಈ ಸಂಬಂಧ ಬಜೆಟ್ ಅಧಿವೇಶನದಲ್ಲೂ ಚರ್ಚೆಯಾಗಿದೆ. ಹೌದು.. ಐಪಿಎಲ್ ಟಿಕೆಟ್ ಸಂಬಂಧ ಆಡಳಿತರೂಢ ಹಾಗೂ ವಿಪಕ್ಷ ಶಾಸಕರು ಐಪಿಎಲ್ ಟಿಕೆಟ್ ಬೇಡಿಕೆ ಇಟ್ಟಿದ್ದಾರೆ. ಶಾಸಕರಿಗೆ ಕನಿಷ್ಠ 4 ರಿಂದ 5 ಟಿಕೆಟ್ ಕೊಡಿಸಿ ಎಂದು ವಿಧಾನಸಭೆಯಲ್ಲಿಂದು ಸದಸ್ಯರು ಪಕ್ಷಾತೀತವಾಗಿ ಸ್ಪೀಕರ್ ಯುಟಿ ಖಾದರ್ ಮುಂದೆ ಬೇಡಿಕೆ ಇಟ್ಟಿದ್ದಾರೆ.

### KSCA ಮುಂದೆ ಅಂಗಲಾಚುವ ಪರಿಸ್ಥಿತಿ

ಉದ್ದೇಶಿತ ಸ್ಟೇಡಿಯಂ ಸಂಬಂಧ ನಡೆದ ಚರ್ಚೆ ವೇಳೆ ಪ್ರತಿಪಕ್ಷ ನಾಯಕ ಆರ್ ಅಶೋಕ್ ಮಾತನಾಡಿ, ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಶಾಸಕರಿಗೆ ಅಗೌರವವಾಗುತ್ತಿದೆ ಮತ್ತು ಸರಿಯಾಗಿ ಟಿಕೆಟ್ ಸಿಗುತ್ತಿಲ್ಲ. ಮೊನ್ನೆ 11 ಜನ ಕಾಲ್ತುಳಿತದಲ್ಲಿ ಸತ್ತಿದ್ದಾರೆ. ಮತ್ತೊಂದು ಸ್ಟೇಡಿಯಂ ಬೇಡ. ಚಿನ್ನಸ್ವಾಮಿ ಸ್ಟೇಡಿಯಂ ಜಾಗ ನಮ್ಮದು. ಅಲ್ಲಿ ಕ್ರಿಕೆಟ್ ಟ್ರೈನಿಂಗ್ ಮಾಡಿ ಎಂದು ಜಾಗ ನೀಡಿದ್ದೇವೆ. ಅವರು ಏನು ತರಬೇತಿ ನೀಡುತ್ತಿದ್ದಾರೆ ಎಂದು ಪ್ರಶ್ನಿಸಿದ ಅಶೋಕ್, ಒಂದು ಟಿಕೆಟ್‌ಗೆ ಕರ್ನಾಟಕ ರಾಜ್ಯ ಕ್ರಿಕೆಟ್ ಮಂಡಳಿ (KSCA) ಮುಂದೆ ಅಂಗಲಾಚುವ ಪರಿಸ್ಥಿತಿ ಇದೆ. ನಮ್ಮ ಹೆಸರಿನಲ್ಲಿರುವ ಟಿಕೆಟ್‌ಗಳನ್ನು ಮಾರಿಕೊಳ್ಳುತ್ತಾರೆ ಎಂದು ಕಿಡಿಕಾರಿದರು.

ಸ್ಟೇಡಿಯಂಗೆ 16 ಎಕರೆ 32 ಗುಂಟೆ ಜಾಗ ನಾವು ಕೊಟ್ಟಿದ್ದೇವೆ. ನಮ್ಮ ಟಿಕೆಟ್‌ಗೆ ಎರಡು ಸಾವಿರ, ಮೂರು ಸಾವಿರ, ಇಪ್ಪತ್ತು ಸಾವಿರ ರೂ. ಚಾರ್ಜ್ ಮಾಡ್ತಾರೆ. ಅವರು ತಿಂಗಳಿಗೆ ಸರ್ಕಾರಕ್ಕೆ ಕೊಡೋದು ಕೇವಲ 1600 ರೂ. ಮಾತ್ರ. ನಾವು 16 ಎಕರೆ ಜಾಗ ನೀಡಿದ್ದೇವೆ. ನಮ್ಮ ತಲೆ



ಮೇಲೆ ಎಳೀತಾರೆ, ಅಂಥವರಿಗಾಗಿ ಇನ್ನೊಂದು ಸ್ಟೇಡಿಯಂ ಮಾಡಲು ಹೊರಟಿದ್ದೀರಿ. ಇವರಿಗೆ ಮೊದಲು ಬುದ್ಧಿ ಕಲಿಸಿ ಎಂದು ಆಗ್ರಹಿಸಿದರು.

### ಟಿಕೆಟ್ ಬಗ್ಗೆ ಧ್ವನಿ ಎತ್ತಿದ ಕಾಂಗ್ರೆಸ್ ಶಾಸಕ

ಈ ವೇಳೆ ಮಾತಾಡಿದ ಕೈ ಶಾಸಕ ವಿಜಯಾನಂದ ಕಾಶಪ್ಪನವರ್, ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ವೀಕ್ಷಕರ ಸಂಖ್ಯೆಯನ್ನು ಏರಿಸಿ. ಶಾಸಕರಿಗೆ ಒಂದೇ ಟಿಕೆಟ್ ಅದೂ ಕೆಳಗಡೆಯ ಗ್ಯಾಲರಿಯಲ್ಲಿ ಕೊಡುತ್ತಾರೆ. ಶಾಸಕರಿಗೆ ಕೂರಲು ಮೊದಲು ಸೂಕ್ತ ಅವಕಾಶ ಮಾಡಿಕೊಡಲಿ. ಹೊಸ ಸ್ಟೇಡಿಯಂ ಆಮೇಲೆ ಮಾಡಿ. ಶಾಸಕರಿಗೆ ಪ್ರತ್ಯೇಕ ಲಾಂಜ್ ಮಾಡಿ ಐದು ಟಿಕೆಟ್ ಕೊಡಿಸಿ. ಟಿಕೆಟ್ ಕಾಸಂತೆಯಲ್ಲಿ ಮಾರುತ್ತಾರೆ. ಆದರೆ ನಮಗೆ ಕೊಡುವುದಿಲ್ಲ. ಶಾಸಕರು ಅಂದ್ರೆ ಗೌರವ ಇಲ್ವಾ? ನಮಗೆ ಐದು ಟಿಕೆಟ್ ಕೊಡಲಿ ಎಂದು ಒತ್ತಾಯಿಸಿದರು.

### ಟಿಕೆಟ್ ವ್ಯವಸ್ಥೆ ಮಾಡುವಂತೆ ಸರ್ಕಾರಕ್ಕೆ ಸ್ಪೀಕರ್ ಸಲಹೆ

ಬಳಿಕ ಮಾತಾಡಿದ ಸ್ಪೀಕರ್ ಖಾದರ್, ಶಾಸಕರು ಕ್ರಿಕೆಟ್ ಟಿಕೆಟ್ ಬಗ್ಗೆ ಗಂಭೀರ ವಿಚಾರ ಎತ್ತಿದ್ದಾರೆ. ಸರ್ಕಾರ ಕೆಎಸ್‌ಸಿಎ ಅವರನ್ನು ಕರೆಸಿ ಒಂದು ತೀರ್ಮಾನ ಮಾಡಬೇಕು. ಶಾಸಕರು ಬಂದ್ರೆ ಮಾತ್ರ ಟಿಕೆಟ್ ನೀಡುತ್ತೇವೆ ಎನ್ನುತ್ತಾರೆ. ಶಾಸಕರು ಕ್ಯೂನಲ್ಲಿ ನಿಂತ್ರೆ ಟಿಕೆಟ್ ಕೊಡೋರಿಗೆ, ಭದ್ರತೆಯವರಿಗೆ ಏನು ಗೊತ್ತಿದೆ. ಗೌರವ ಸಿಗದಕ್ಕೆ ಶಾಸಕರು ಹೋಗುವುದೇ ಇಲ್ಲ. ಶಾಸಕರಿಗೆ ಕನಿಷ್ಠ ನಾಲ್ಕು ವಿಐಪಿ ಟಿಕೆಟ್ ಕೊಡುವ ವ್ಯವಸ್ಥೆ ಆಗಲಿ ಎಂದು ಸಲಹೆ ನೀಡಿದರು.

### ಟಿಕೆಟ್ ನೀಡುವ ಬಗ್ಗೆ ಡಿಕೆಶಿ ಹೇಳಿದ್ದೇನು?

ಕೊನೆಗೆ ಡಿಕೆಶಿ ಪ್ರತಿಕ್ರಿಯಿಸಿ, ಖಂಡಿತವಾಗಿ ಅವರನ್ನು ಕರೆಸಿ ಮಾತಾಡುತ್ತೇವೆ. ನಾನೂ ಕೆಎಸ್‌ಸಿಎ ಸದಸ್ಯ. ಅವರನ್ನು ಕರೆಸಿ ಶಾಸಕರ ಟಿಕೆಟ್ ಬಗ್ಗೆ ಮಾತಾಡುತ್ತೇನೆ. ಶಾಸಕರಿಗೆ ಎಲ್ಲ ಹಕ್ಕೂ ಇದೆ. ಖಾದರ್ ಆದೇಶ, ಸಾಮ್ರಾಟ್ ಅಶೋಕ್ ಮನವಿ ಇದೆ ಎಂದು ಹೇಳುತ್ತೇನೆ ಎಂದು ಉತ್ತರಿಸಿ ಚರ್ಚೆಗೆ ತೆರೆ ಎಳೆದರು.

# ಸಾಲು ಸಾಲು ಸಮಸ್ಯೆಗಳನ್ನು ಹೊತ್ತು ಬಂದ ಜನ ಸಾಗರ: ಸಾರ್ವಜನಿಕರ ಅಹವಾಲು ಸ್ವೀಕರಿಸಿದ ಡಿಸಿ, ಶೀಘ್ರ ವಿಲೇವಾರಿಗೆ ಸೂಚನೆ

ಪಾವಗಡ: ಜನರ ಸಮಸ್ಯೆಗಳಿಗೆ ಸ್ಥಳೀಯವಾಗಿಯೇ ಪರಿಹಾರ ಕಲ್ಪಿಸುವ ಉದ್ದೇಶದಿಂದ ಸಾರ್ವಜನಿಕರ ಅಹವಾಲುಗಳನ್ನು ನೇರವಾಗಿ ಆಲಿಸಲು ಜಿಲ್ಲಾಧಿಕಾರಿ ಶುಭಕಲ್ಯಾಣ್ ಅವರ ನೇತೃತ್ವದಲ್ಲಿ ಗುರುವಾರ ಬೆಳಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಪ್ರಾಥಮಿಕ ಆರೋಗ್ಯ ಕೇಂದ್ರ ಚನ್ನಕೇಶವಪುರ ಇಲ್ಲಿ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿ, ನಂತರ ಮಧ್ಯಾಹ್ನ 2.30 ರಿಂದ ಸಂಜೆ 5.30 ರವರೆಗೆ ಪಾವಗಡ ತಾಲ್ಲೂಕು ಕಛೇರಿ ಸಭಾಂಗಣದಲ್ಲಿ ನೂರಾರು ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿದರು.



ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಶುಭಕಲ್ಯಾಣ್ ಅವರು, ಜನಸಾಮಾನ್ಯರು ತಮ್ಮ ಸಮಸ್ಯೆಗಳನ್ನು ಅಹವಾಲು ಮೂಲಕ ನೀಡಿದ ಅರ್ಜಿಗಳನ್ನು ಅಧಿಕಾರಿಗಳು ನಿರ್ಲಕ್ಷ್ಯ ವಹಿಸದೆ ಶೀಘ್ರ ಸ್ಪಂದಿಸಬೇಕು. ಜನಸಂಪರ್ಕ ಸಭೆಗಳು ಜನರಿಗೆ ಸಹಕಾರಿಯಾಗಬೇಕು. ಸರ್ಕಾರದ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ನ್ಯಾಯಯುತವಾಗಿ ತಲುಪಿಸಬೇಕು, ಜನ ಸಾಮಾನ್ಯರು ಕೆಲಸ ಕಾರ್ಯಗಳಿಗೆ ಕಚೇರಿಗೆ ಬಂದಾಗ ವಿಳಂಬ ಮಾಡದೇ ಅವರ ಕೆಲಸ ಮಾಡುವ ಮೂಲಕ ಯೋಜನಗಳ ಲಾಭ ದೊರಕಿಸಿಕೊಡಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದರು. ಸರ್ಕಾರ ಬಡವರಿಗಾಗಿ ನೀಡುವ ವೃದ್ಧಾಪ್ಯ ವೇತನ, ವಿಧವಾ ವೇತನ ಮತ್ತು ಅಂಗವಿಕಲರ ಮಾಸಾಶನದಂತಹ ಯೋಜನೆಗಳನ್ನು ತಲುಪಿಸುವಲ್ಲಿ ವಿಳಂಬ ಮಾಡುವುದು ಅಕ್ಷಮ್ಯ ಅಪರಾಧ. ಜನರ ಕೆಲಸ ಮಾಡಲು ನಿಮಗೆ ಸಂಬಳ ನೀಡಲಾಗುತ್ತಿದೆ, ಅವರನ್ನು ಕಚೇರಿಗಳಿಗೆ ಅಲೆದಾಡಿಸಲು ಅಲ್ಲ ಎಂದು ಜಿಲ್ಲಾಧಿಕಾರಿಗಳು ವೇದಿಕೆಯಲ್ಲೇ ಅಧಿಕಾರಿಗಳ ವಿರುದ್ಧ 'ಗರಂ' ಆದರು.

ಜಮೀನು ದಾಖಲೆಗಳು, ಪಹಣಿ ತಿದ್ದುಪಡಿ ಹಾಗೂ ಭೂ ಒತ್ತುವರಿ ಸಮಸ್ಯೆಗಳು, ವೃದ್ಧಾಪ್ಯ ವೇತನ, ವಿಧವಾ ವೇತನ ಹಾಗೂ ಅಂಗವಿಕಲರ ಮಾಸಾಶನ ವಿಳಂಬದ ಬಗ್ಗೆ ದೂರುಗಳು ಮತ್ತು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅನೈರ್ಮಲ್ಯ, ಕುಡಿಯುವ ನೀರಿನ ಸಮಸ್ಯೆ ಹಾಗೂ ಹೊಸ ಪಡಿತರ ಚೀಟಿ ವಿತರಣೆ ಮತ್ತು ಹಾಲಿ ಕಾರ್ಡ್‌ಗಳಲ್ಲಿನ ತಿದ್ದುಪಡಿ ಪ್ರಕ್ರಿಯೆಯಲ್ಲಿನ ವಿಳಂಬದ ಬಗ್ಗೆ ಹಾಗೂ ಇನ್ನಿತರೆ ಸಮಸ್ಯೆಗಳ ಬಗ್ಗೆ ಜಿಲ್ಲಾಧಿಕಾರಿಗಳ ಮುಂದೆ ಸಾರ್ವಜನಿಕರು ತಮ್ಮ ಅಳಲು ತೋಡಿಕೊಂಡರು.

ಸಿ.ಕೆ.ಪುರದಲ್ಲಿ ನಡೆದ ಸಭೆಯಲ್ಲಿ ಸಾರ್ವಜನಿಕರು ಯಾವುದೇ ಗೊಂದಲವಿಲ್ಲದೆ ಶಿಸ್ತುಬದ್ಧವಾಗಿ ಸರತಿ ಸಾಲಿನಲ್ಲಿ ನಿಂತು ಜಿಲ್ಲಾಧಿಕಾರಿಗಳಿಗೆ ದೂರುಗಳನ್ನು ಸಲ್ಲಿಸಿದರು.

ಮಧ್ಯಾಹ್ನ ತಾಲ್ಲೂಕು ಕಚೇರಿಯ ಕೋರ್ಟ್ ಹಾಲ್ ನಲ್ಲಿ ನಡೆದ ಜನಸಂಪರ್ಕ ಸಭೆಯಲ್ಲಿ ಕಿಕ್ಕಿರಿದು ನಿಂತಿದ್ದ ಜನ ಸಾಮಾನ್ಯರ ನೂಕು ನುಗ್ಗಲಿನಿಂದ ಸ್ವಲ್ಪ ಹೊತ್ತು ಬಿಗಿ ವಾತಾವರಣ ಸೃಷ್ಟಿಯಾಗಿತ್ತು. ಕಂದಾಯ ಇಲಾಖೆ 287, ತಾಲ್ಲೂಕು ಪಂಚಾಯಿತಿ 63, ಭೂ ದಾಖಲೆಗಳ ಇಲಾಖೆ 14 ಸೇರಿದಂತೆ ವಿವಿಧ ಇಲಾಖೆಗಳ ವ್ಯಾಪ್ತಿಗೆ ಒಟ್ಟು 404 ಅರ್ಜಿಗಳು ಸ್ವೀಕೃತವಾಗಿವೆ.

ಈ ಸಂದರ್ಭದಲ್ಲಿ ಮಧುಗಿರಿ ವಿಭಾಗದ ಉಪ ವಿಭಾಗಾಧಿಕಾರಿ ಗೋಟೂರು ಶಿವಪ್ಪ, ತಹಶೀಲ್ದಾರ್ ವೈ.ರವಿ, ತಾ.ಪಂ. ಕಾರ್ಯನಿರ್ವಹಣಾಧಿಕಾರಿ ಮಧುಸೂದನ್ ಸೇರಿದಂತೆ ತಾಲ್ಲೂಕು ಮಟ್ಟದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಡಾ. ಶಿವಕುಮಾರ ಸ್ವಾಮೀಜಿಗಳ ಪುಣ್ಯಸ್ಮರಣೆ ಗೋಕುಲ ಬಡಾವಣೆಯಲ್ಲಿ ಅನ್ನದಾಸೋಹ ಸೇವೆ

ತುಮಕೂರು: ಎಡೆಯೂರಿನ ಸಿದ್ದಲಿಂಗೇಶ್ವರ ರಥೋತ್ಸವ, ಶ್ರೀರಾಮ ನವಮಿ ಹಾಗೂ ಸಿದ್ಧಗಂಗಾ ಮಠದ ಡಾ. ಶಿವಕುಮಾರ ಮಹಾಸ್ವಾಮಿಗಳ ಪುಣ್ಯಸ್ಮರಣಾ ಮಹೋತ್ಸವವನ್ನು ನಗರದ ಗೋಕುಲ ಬಡಾವಣೆಯ ಬಸವೇಶ್ವರ ಸರ್ಕಲ್‌ನಲ್ಲಿ ಭಕ್ತರು ಭಕ್ತಿ, ಸಂಭ್ರಮದಿಂದ ಆಚರಿಸಿದರು.



ಇದರ ಅಂಗವಾಗಿ ನಡೆದ ಕಾರ್ಯಕ್ರಮವನ್ನು ಶಿವಗಂಗೆಯ ಹೊನ್ನಾದೇವಿ ಮಠದ ಶ್ರೀ ರುದ್ರಮುನಿ ಶಿವಾಚಾರ್ಯ ಮಹಾಸ್ವಾಮೀಜಿ ಉದ್ಘಾಟಿಸಿದರು. ಈ ವೇಳೆ ಭಕ್ತರು ಸ್ವಾಮೀಜಿಗಳಿಗೆ ಭಕ್ತಿ ಸಮರ್ಪಿಸಿದರು. ಇದರ ಪ್ರಯುಕ್ತ ಏರ್ಪಡಿಸಿದ್ದ ಅನ್ನದಾಸೋಹದಲ್ಲಿ ಸ್ವಾಮೀಜಿಗಳು ಸಾರ್ವಜನಿಕರಿಗೆ ಪ್ರಸಾದ ವಿತರಿಸಿದರು.

ಕಾರ್ಯಕ್ರಮ ಆಯೋಜನೆ ಮಾಡಿದ್ದ ಈ ಭಾಗದ ಬಿಜೆಪಿ ಮುಖಂಡರಾದ ನಿವೃತ್ತ ಪ್ರಚಾರ್ಯ ಮರಿಬಸಪ್ಪ, ಪ್ರೇಮ್‌ಕುಮಾರ್, ಹಾಗೂ ಬಸಪ್ಪನವರನ್ನು ಸಾರ್ವಜನಿಕರು ಸನ್ಮಾನಿಸಿ ಗೌರವಿಸಿದರು. ಜಗದೀಶ್ ನಿಟ್ಟೂರು ಗುಹೇಶ್ವರ ಇವರ ನೇತೃತ್ವದಲ್ಲಿ ಮಂತ್ರಾರ್ಚನೆ ಹಾಗೂ ಪೂಜಾಕಾರ್ಯಗಳು ನೆರವೇರಿದವು.

# ಕೈ ಕೊಟ್ಟ ಹೈನುಗಾರಿಕೆ : ವಿಪರೀತ ಸಾಲ ಭಾದೆಯಿಂದ ರೈತ ಆತ್ಮಹತ್ಯೆ

ಕೊರಟಗೆರೆ : ತಾಲ್ಲೂಕಿನ ಚನ್ನರಾಯನದುರ್ಗ ಹೋಬಳಿಯ ಕುರಂಕೋಟೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜೋನಿಗರಹಳ್ಳಿ ಗ್ರಾಮದ ರಮೇಶ್ ಬಿನ್ ನರಸಿಂಹಯ್ಯ (49 ವರ್ಷ) ವ್ಯವಸಾಯದ ಜೊತೆಗೆ ಹೈನುಗಾರಿಕೆ ಮಾಡಲು ಮೈಕ್ರೋ ಫೈನಾನ್ಸ್ ಗಳಲ್ಲಿ ಸುಮಾರು ಎಂಟು ಲಕ್ಷ ಸಾಲ ಮಾಡಿದ್ದರು ಎಂದು ರಮೇಶ್ ಪತ್ನಿ ರಾಜಮ್ಮ ತಿಳಿಸಿದ್ದಾರೆ.

ಮೂರ್ನಾಲ್ಕು ವರ್ಷಗಳಿಂದ ತನ್ನ ಹಾಗೂ ತನ್ನ ಪತ್ನಿಯ ಹೆಸರಿನಲ್ಲಿ ಗ್ರಾಮ ಶಕ್ತಿ ಸಂಘದಲ್ಲಿ ಒಂದು ಲಕ್ಷ , ಜನ ಸ್ಮಾಲ್ ಫೈನಾನ್ಸ್ ನಲ್ಲಿ 4.5 ಲಕ್ಷ, ಚೈತನ್ಯ ಫೈನಾನ್ಸ್ ನಲ್ಲಿ 50 ಸಾವಿರ, ಎನ್ & ಟಿ ಫೈನಾನ್ಸ್ ನಲ್ಲಿ 90 ಸಾವಿರ ಹಾಗೂ ಇತರೆ ಫೈನಾನ್ಸ್ ಮತ್ತು ಸಂಘ ಸಂಸ್ಥೆಗಳಲ್ಲಿ ಸಾಲ ಪಡೆದು ಸುಮಾರು 20 ಹಸುಗಳನ್ನು ಸಾಕಿದ್ದಾರೆ ಸಾಕುತ್ತಿದ್ದರು. ಹೇನುಗಾರಿಕೆಯನ್ನೇ ನಂಬಿಕೊಂಡು ಜೀವನ ಸಾಗಿರುತ್ತಿದ್ದ ರೈತ ರಮೇಶ್ ಆತ್ಮಹತ್ಯೆಗೆ ಶರಣಾಗಿದ್ದಾರೆ. ಸುಮಾರು 15 ಹಸುಗಳು ಮಾರಣಾಂತಿಕ ಕಾಯಿಲೆ ಮತ್ತು ರೋಗಗಳಿಂದ ಸಾವನ್ನಪ್ಪಿದ್ದವು ಎನ್ನಲಾಗಿದೆ. ಈ ಕಾರಣದಿಂದ ಸಾಲದ ಕಂತುಗಳನ್ನು ಕಟ್ಟಲಾಗದೆ ಎಲ್ಲದರೂ ಹೋಗಿ ಸಾಯಬೇಕೆಂಬ ಪರಿಸ್ಥಿತಿಗೆ ಬಂದಿದ್ದರು

> ಸಾಲ ಭಾದೆಯಿಂದ ರೈತರ ಆತ್ಮಹತ್ಯೆ ದಿನೇ ದಿನೇ ಹೆಚ್ಚಾಗುತ್ತಿದ್ದು. ಅಲ್ಪ ಸ್ವಲ್ಪ ಇರುವ ಜಮೀನಿನಲ್ಲಿ ವ್ಯವಸಾಯ ಮಾಡುವುದರ ಜೊತೆಗೆ ಹೈನುಗಾರಿಕೆ ಮಾಡಲು ಸಾಲ ಮಾಡಿಕೊಂಡು ತೀರಿಸಲು ಆಗದೆ ನನ್ನ ತಮ್ಮ ತೀವ್ರ ಮನನೊಂದು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ರಾಜ್ಯ ಸರ್ಕಾರ ಮತ್ತು ಸಂಬಂಧ ಪಟ್ಟ ಇಲಾಖೆಗಳು ತಕ್ಷಣವೇ ಎಚ್ಚೆತ್ತುಕೊಂಡು ನನ್ನ ತಮ್ಮನ ಸಾವಿಗೆ ನ್ಯಾಯ ಒದಗಿಸುವುದರ ಜೊತೆಗೆ ಸೂಕ್ತ ಪರಿಹಾರ ನೀಡಬೇಕು.
>
> ನಾಗರಾಜು.
> ಮೃತ ರಮೇಶ್ ಸಹೋದರ. ಜೋನಿಗರಹಳ್ಳಿ

ಎಂದು ಮೃತ ರಮೇಶ್ ಪತ್ನಿ ರಾಜಮ್ಮ ತಿಳಿಸಿದ್ದಾರೆ.

ಹೆಚ್ಚು ಸಾಲ ಮಾಡಿಕೊಂಡು ಬಡ್ಡಿ ಮತ್ತು ಅಸಲು ತೀರಿಸಲಾಗದೇ ಮನನೊಂದಿದ್ದ ರೈತ ರಮೇಶ್ ಹುಣಸೆ ಹಣ್ಣು ವ್ಯಾಪಾರಕ್ಕೆ ಹೋಗಿ ಬರುತ್ತೇನೆಂದು ಹೇಳಿ ಹೋಗಿದ್ದ ರಮೇಶ್ ಮರಳಿ ಮನೆಗೆ ಬಂದಿರಲಿಲ್ಲ. ದೂರವಾಣಿ ಕರೆ ಮಾಡಿದಾಗ ಮೊಬೈಲ್ ಸ್ವಿಚ್ ಆಫ್ ಆಗಿರುವುದು ತಿಳಿದು ಬಂದಿದೆ. ವಿಪರೀತ ಸಾಲ



ಮಾಡಿಕೊಂಡು ಜೀವನದಲ್ಲಿ ಜಿಗುಪ್ಸೆ ಹೊಂದಿದ್ಧ ರೈತ ರಮೇಶ್ ಜೋನಿಗರಹಳ್ಳಿ ಗ್ರಾಮದ ಸರ್ವೇ ನಂಬರ್ 81/4 ರ ಜಮೀನಿನಲ್ಲಿ ಇರುವ ಹೊಂಗೆ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ವಿಷಯ ಗುರುವಾರ ಬೆಳಗ್ಗೆ ಕುಟುಂಬಸ್ಥರಿಗೆ ತಿಳಿದಿದೆ.

ವಿಷಯ ತಿಳಿದ ತಕ್ಷಣವೇ ಕೊರಟಗೆರೆ ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಸ್ಥಳ ಪರಿಶೀಲನೆ ಮಾಡಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ನಂತರ ಮರಣೋತ್ತರ ಪರೀಕ್ಷೆಗೆ ಮೃತ ದೇಹವನ್ನು ಕೊರಟಗೆರೆ ಸಾರ್ವಜನಿಕ ಆಸ್ಪತ್ರೆಗೆ ರವಾನೆ ಮಾಡಲಾಗಿದೆ.

## 'ಸಾಹಿತ್ಯಶ್ರೀ' ಪ್ರಶಸ್ತಿಗೆ ಭಾಜನರಾದ ಓ.ನಾಗರಾಜು



ತುಮಕೂರು: ತರಗತಿಯಲ್ಲಿ ವಿದ್ಯಾರ್ಥಿ–ಗಳಿಗೆ ಸಾಹಿತ್ಯ ಬೋಧನೆ ಮಾಡುತ್ತಾ, ಸಾಹಿತ್ಯ ಕೃಷಿಯಲ್ಲಿ ತೊಡಗಿಸಿಕೊಂಡಿ–ರುವ ಪ್ರಾಧ್ಯಾಪಕ ಓ.ನಾಗರಾಜು ಅವರು ಕರ್ನಾಟಕ ಸಾಹಿತ್ಯ ಅಕಾಡೆಮಿಯ 2025ನೇ ಸಾಲಿನ 'ಸಾಹಿತ್ಯಶ್ರೀ' ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ನೀಡಿರುವ ಅಮೂಲ್ಯ ಸೇವೆ ಪರಿಗಣಿಸಿ ನಾಗರಾಜು ಅವರನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಪ್ರಶಸ್ತಿಯು 25 ಸಾವಿರ ನಗದು ಬಹುಮಾನ, ಫಲಕ, ಪ್ರಮಾಣಪತ್ರ ಒಳಗೊಂಡಿದೆ. ಪ್ರಸ್ತುತ ಗುಬ್ಬಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕನ್ನಡ ಪ್ರಾ–ಧ್ಯಾಪಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ವಿಮರ್ಶೆ, ಜಾನಪದ ಸಂಶೋಧನೆ ಮತ್ತು ನಾಟಕ ರಚನೆಯಲ್ಲಿ ಪರಿಣತಿ ಹೊಂದಿದ್ದಾರೆ. ಕಾದಂಬರಿ, ಕವನ ಸಂಕಲನ, ಕಥಾ ಸಂಕಲನ, ನಾಟಕ ಒಳಗೊಂಡಂತೆ 11 ಕೃತಿಗಳು, 5 ಸಂಶೋಧನಾ ಕೃತಿ ರಚಿಸಿದ್ದಾರೆ. 2010ರಲ್ಲಿ ಬಿಡುಗಡೆಯಾದ 'ಕುರಂಗರಾಜ ವೈಭವ' ಐತಿಹಾಸಿಕ ಕಾದಂಬರಿ ಮೆಚ್ಚುಗೆಗೆ ಪಾತ್ರವಾಗಿತ್ತು. ದಲಿತ ರಾಜನ ಕುರಿತು ಜನರಿಗೆ ಪರಿಚಯಿಸಿದ ಮೊದಲ ಕಾದಂಬರಿಯಾಗಿದೆ. 'ಹಟ್ಟಿ ಅರಳಿ ಹೂವಾಗಿ'. 'ಪಲ್ಲಟ', 'ಹಿಂದೂಪುರ' ಅವರ ಇತರೆ ಕಾದಂಬರಿಗಳು. 'ಸೋಂಕು', 'ನಮ್ಮೊ ಒಂದು ಬಾಳು' ಕಥಾ ಸಂಕಲನಗಳು ಮೂಡಿ ಬಂದಿವೆ. ಸಂಶೋಧನಾ ಕೃತಿ, ಹಲವು ಲೇಖನಗಳನ್ನು ಸಹ ಬರೆದಿದ್ದಾರೆ.

ನಾಗರಾಜು ಕೊರಟಗೆರೆ ತಾಲ್ಲೂಕಿನ ಚಟ್ಟೇನಹಳ್ಳಿ ಗ್ರಾಮದವರು. ಮೊದಲಿಗೆ ಶಿವಮೊಗ್ಗದ ಸೊರಬ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕನ್ನಡ ಉಪನ್ಯಾಸಕರಾಗಿ ಸೇವೆ ಆರಂಭಿಸಿದರು. ಅಲ್ಲಿಂದ ತುರುವೇಕೆರೆ, ತುಮಕೂರು ಕಲಾ ಕಾಲೇಜು, ಕೊರಟಗೆರೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸಿ, ಕಳೆದ ಎರಡೂವರೆ ವರ್ಷಗಳಿಂದ ಗುಬ್ಬಿ ಕಾಲೇಜಿನಲ್ಲಿ ಕೆಲಸ ಮಾಡುತ್ತಿದ್ದಾರೆ.

'ಸಮಾಜ ಕಟ್ಟುವ, ಬೆಸೆಯುವ, ಒಗ್ಗಟ್ಟು ಮೂಡಿಸುವಲ್ಲಿ ಸಾಹಿತ್ಯ ಪ್ರಮುಖ ಪಾತ್ರ ವಹಿಸುತ್ತದೆ. ಸೃಜನಶೀಲ ಸಾಹಿತ್ಯ ರಚನೆಗೆ ಇಂತಹ ಪ್ರಶಸ್ತಿಗಳು ಮತ್ತಷ್ಟು ಪ್ರೇರಣೆ, ಸ್ಫೂರ್ತಿ ನೀಡುತ್ತವೆ. ಪ್ರಶಸ್ತಿ ಖುಷಿ ಕೊಟ್ಟಿದೆ' ಎಂದು ಓ.ನಾಗರಾಜು ಪ್ರತಿಕ್ರಿಯಿಸಿದರು.

# ಪರವಾನಗಿ ಭೂಮಾಪಕರ ಸಂಘದ ವತಿಯಿಂದ ಶಾಸಕ ಹೆಚ್ ಡಿ ರಂಗನಾಥ್ "ರವರಿಗೆ ಮನವಿ

ಕುಣಿಗಲ್ : ಸರ್ಕಾರಿ ಭೂಮಾಪಕರಂತೆ ನಮಗೂ ಸಮಾನ ಕೆಲಸಕ್ಕೆ ಸಮಾನ ವೇತನ ಹಾಗೂ ಹೆಚ್ಚಿನ ಭದ್ರತೆ ಕಲ್ಪಿಸಬೇಕು, ಮತ್ತು ಭೂಮಾಪಕರ ನ್ಯಾಯ ಸಮ್ಮತ ವಿವಿಧ ಬೇಡಿಕೆಗಳ ಕುರಿತು ಸರ್ಕಾರದ ಗಮನಕ್ಕೆ ತರಬೇಕು,ಎಂದು ಅಖಿಲ ಕರ್ನಾಟಕ ಸರ್ಕಾರಿ ಪರವಾನಗಿ ಭೂಮಾಪಕರ ಸಂಘದ ವತಿಯಿಂದ ಶಾಸಕ ಹೆಚ್ ಡಿ ರಂಗನಾಥ್ ಅವರಿಗೆ ಮನವಿ ಪತ್ರ ಸಲ್ಲಿಸಿದ್ದಾರೆ, ನಂತರ ವಿಧಾನಸಭೆಯಲ್ಲಿ ಭೂಮಾಪಕರ ಪರವನಾಗಿ ಧ್ವನಿ ಎತ್ತುವಂತೆ ಮನವಿ ಮಾಡಿದ್ದಾರೆ,,

ನಮ್ಮ ಕುಣಿಗಲ್ ತಾಲೂಕಿನ ಪರವಾನಗಿ ಭೂಮಾಪಕರುಗಳ ಪರವಾಗಿ ರಾಜ್ಯಾದ್ಯಂತ ಪರವಾನಗಿ ಭೂಮಾಪಕರುಗಳು ತಮ್ಮ ನ್ಯಾಯ ಸಮ್ಮತ ಬೇಡಿಕೆಗಳಾದ ಒಂದು ಬಾರಿ ವಿಶೇಷ ನೇಮಕಾತಿ ಅಥವಾ ಸಮಾನ ಕೆಲಸಕ್ಕೆ ಸಮಾನ ವೇತನ ಹಾಗೂ ಸೇವಾ ಭದ್ರತೆಗಾಗಿ ಕಳೆದ ಸುಮಾರು ಒಂದು ತಿಂಗಳಿನಿಂದ ಶಾಂತಿಯುತವಾಗಿ ಮತ್ತು ಒಗ್ಗಟ್ಟಿನಿಂದ ಮುಷ್ಕರದಲ್ಲಿ ಭಾಗವಹಿಸುತ್ತಿದ್ದೇವೆ, ನಾವು ಇಲಾಖೆಯಲ್ಲಿರುವ ಸರ್ಕಾರಿ ಭೂಮಾಪಕರಂತೆ ಸಮಾನ ಜವಾಬ್ದಾರಿಗಳೊಂದಿಗೆ ವಿವಿಧ ಕೆಲಸಗಳನ್ನು ನಿರ್ವಹಿಸುತ್ತಿದ್ದರೂ, ನಮಗೆ ತಕ್ಕಮಟ್ಟದ ವೇತನ ಹಾಗೂ ಭದ್ರತೆ ಇಲ್ಲದಿರುವುದು ನಮ್ಮ ಬದುಕನ್ನು ಸಂಕಷ್ಟಕ್ಕೆ ತಳ್ಳಿದೆ, ಈ ಸಮಸ್ಯೆಯನ್ನು ಹಲವು ಬಾರಿ ಇಲಾಖೆಯ ಗಮನಕ್ಕೆ ತಂದಿದ್ದರು ಸಹ ಇದುವರೆಗೂ ಯಾವುದೇ ಶಾಶ್ವತ ಪರಿಹಾರ ನಮಗೆ ದೊರಕಿರುವುದಿಲ್ಲ, ಈ ಹೋರಾಟವು ಯಾರ ವಿರುದ್ಧವೂ ಅಲ್ಲ ನಮ್ಮ ವೃತ್ತಿಯ ಗೌರವ ಮತ್ತು ಜೀವನ ಭದ್ರತೆಗಾಗಿ ನಡೆಯುತ್ತಿರುವ ನ್ಯಾಯ ಸಮ್ಮತ ಹೋರಾಟವಾಗಿದೆ, ಇದರಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವುದನ್ನು ನಾವು ಮನಗಂಡಿದ್ದೇವೆ, 4.64 ಲಕ್ಷ ಅರ್ಜಿಗಳು ವಿಲೇವಾರಿ ಆಗಿರುವುದಿಲ್ಲ, ಲಕ್ಷಾಂತರ ಅರ್ಜಿಗಳು ಬಾಕಿ ಉಳಿದಿವೆ, ಆದ್ದರಿಂದ ಈ ಕೂಡಲೇ ನಮ್ಮ ಬೇಡಿಕೆಯನ್ನು ಈಡೇರಿಸಬೇಕು ಎಂದು ಒತ್ತಾಯಿಸಿದ್ದಾರೆ,,



ಶಾಶ್ವತ ಪರಿಹಾರ ಸಿಗುವವರೆಗೂ ನಾವು ಈ ಹೋರಾಟವನ್ನು ಮುಂದುವರಿಸುವ ಅನಿವಾರ್ಯತೆ ಎದುರಾಗಿದೆ, ಆದ್ದರಿಂದ ತಾವುಗಳು ದಯವಿಟ್ಟು ಪರವಾನಗಿ ಭೂಮಾಪಕರ ಸಮಸ್ಯೆಯನ್ನು ಸರ್ಕಾರದ ಗಮನಕ್ಕೆ ತಂದು, ನಮ್ಮ ನ್ಯಾಯ ಸಮ್ಮತ ಬೇಡಿಕೆಗಳ ಕುರಿತು, ಸಂಬಂಧಿತ ಸಚಿವರು ಹಾಗೂ ಅಧಿಕಾರಿಗಳೊಂದಿಗೆ ಚರ್ಚಿಸಿ ಸೂಕ್ತ ಪರಿಹಾರ ಕಂಡುಕೊಳ್ಳುವಂತೆ, ಈ ವಿಷಯದಲ್ಲಿ ತ್ವರಿತ ಕ್ರಮ ಕೈಗೊಳ್ಳುವಂತೆ ಹಾಗೂ ನಿಮ್ಮ ಹಸ್ತಕ್ಷೇಪದಿಂದ ನಮ್ಮ ಮನಸ್ಸಿಗೆ ನ್ಯಾಯ ದೊರೆಯುತ್ತದೆ,ಎಂಬ ಆತ್ಮ ವಿಶ್ವಾಸವನ್ನು ಇಟ್ಟುಕೊಂಡಿದ್ದೇವೆ,ಎಂದು ಮಾನ್ಯ ಶಾಸಕರಾದ "ಹೆಚ್ ಡಿ ರಂಗನಾಥ್ "ಅವರಿಗೆ ಮನವಿ ಪತ್ರ ಸಲ್ಲಿಸಿದ್ದಾರೆ,,

ಸುಮಾರು 20 ವರ್ಷಗಳಿಂದ ನೇಮಕಾತಿ ಮಾಡಬೇಕು ಎಂದು ಸಾಕಷ್ಟು ಹೋರಾಟ ಮಾಡಿದರು ಯಾವುದೇ ಪ್ರಯೋಜನವಾಗಿಲ್ಲ, ರಾಜ್ಯದ ಮುಖ್ಯಮಂತ್ರಿಗಳಾದ ಸಿಎಂ ಸಿದ್ದರಾಮಯ್ಯನವರು ಕೊಟ್ಟ ಮಾತನ್ನೇ ಮರೆತಿದ್ದಾರೆ, ಒಂದು ವರ್ಷ ಕಳೆದರೂ ಇನ್ನೂ ಸಹ ನಮ್ಮ ಬೇಡಿಕೆಗಳನ್ನು ಈಡೇರಿಸುವಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ, ಸರ್ಕಾರಿ ಅಧಿಕಾರಿಗಳಿಗೆ ಸಿಗುವಂತಹ ಎಲ್ಲಾ ಅನುಕೂಲತೆಗಳನ್ನು ನಮಗೂ ನೀಡಬೇಕು,ಎಂದು ಎಷ್ಟು ಕೂಗಿ ಹೋರಾಟ ಮಾಡಿದರು ಸಹ ಸರ್ಕಾರ ನಮ್ಮನ್ನು ಕಡೆಗಣಿಸುತ್ತಿದೆ, ಸರ್ಕಾರಿ ಭೂಮಾಪಕರಂತೆ ನಾವು ಕೂಡ ಕರ್ತವ್ಯ ನಿರ್ವಹಿಸುತ್ತಿದ್ದೇನೆ ಆದರೆ ಅವರಿಗೊಂದು ನ್ಯಾಯ ನಮಗೆ ಒಂದು ನ್ಯಾಯ ತೋರುತ್ತಿರುವುದು ಯಾವುದೇ ರೀತಿ ಸರಿಯಲ್ಲ, ಎಂದು ಮಾತನಾಡಿದರು,

## ವಿವಿಧ ಕಾಮಗಾರಿಗಳಿಗೆ ಶಾಸಕ ಸುರೇಶ್‌ಗೌಡ ಶಂಕುಸ್ಥಾಪನೆ

ತುಮಕೂರು: ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಗೂಳೂರು, ಗೂಳಹರವೆ, ಹೆತ್ತೇನಹಳ್ಳಿ ಗ್ರಾಮ ಪಂಚಾಯ್ತಿಯ ಕುಂಬಯ್ಯನಹಳ್ಳಿ ಹಾಗೂ ರಂಗಯ್ಯನಪಾಳ್ಯ ಗ್ರಾಮಗಳಲ್ಲಿ ಶಾಸಕ ಬಿ.ಸುರೇಶ್‌ಗೌಡರು ಸುಮಾರು 2.60 ಕೋಟಿ ರೂ. ವೆಚ್ಚದ ಸಿ.ಸಿ. ರಸ್ತೆ ಹಾಗೂ ಚರಂಡಿ ಕಾಮಗಾರಿಗೆ ಗುರುವಾರ ಭೂಮಿಪೂಜೆ ನೆರವೇರಿಸಿದರು.



ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ ಲೋಕೋಪಯೋಗಿ ಇಲಾಖೆಯಿಂದ ಈ ಕಾಮಗಾರಿ ಕೈಗೊಳ್ಳಲಾಗಿದೆ. ಇದೇ ವೇಳೆ ಗೂಳೂರು ಗ್ರಾಮದಲ್ಲಿ ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಯ ಜಲ ಜೀವನ್ ಮಿಷನ್ ಯೋಜನೆಯಡಿ ಸುಮಾರು 2 ಕೋಟಿ 34 ಲಕ್ಷ ರೂ. ಗಳ ಅನುದಾನದ ಕಾಮಗಾರಿಯ ಶಂಕುಸ್ಥಾಪನೆ ನೆರವೇರಿಸಿದರು.

ಜಿಲ್ಲಾ ಪಂಚಾಯ್ತಿಯ ಮಾಜಿ ಸದಸ್ಯ ಗೂಳೂರು ಶಿವಕುಮಾರ್, ಗೂಳೂರು ಹಾಗೂ ಹೆತ್ತೇನಹಳ್ಳಿ ಗ್ರಾಮ ಪಂಚಾಯ್ತಿಯ ಮಾಜಿ ಅಧ್ಯಕ್ಷರು, ಉಪಾಧ್ಯಕ್ಷರು, ಮಾಜಿ ಸದಸ್ಯರುಗಳು, ಮುಖಂಡರುಗಳಾದ ಸಿದ್ದೇಗೌಡ, ದೊಡ್ಡಸಾರಂಗಿ ಶಂಕರಣ್ಣ, ಮಾಜಿ ಎಪಿಎಂಸಿ ನಿರ್ದೇಶಕ ಸುಭಾಶ್, ಚಂದ್ರಣ್ಣ, ಬಸವರಾಜ್, ಕುಮಾರ್, ಸಿದ್ದರಾಜು , ಕೃಷ್ಣಮೂರ್ತಿ, ವೆಂಕಟೇಶ್, ಚಿಕ್ಕರಂಗಯ್ಯ, ಲೋಕೇಶ್, ಅಂಗಡಿ ರಂಗಪ್ಪ, ರೇಣುಕಾ ಸ್ವಾಮಿ ಶೇಖರ್, ತಿಮ್ಮಪ್ಪ, ರವೀಶ್ ಸೋಮಶೇಖರ್, ಹನುಮಂತರಾಯಪ್ಪ, ಪಲ್ಲಯ್ಯ, ಶ್ರೀಧರ್, ಬಸವರಾಜ್, ನಾಗರಾಜ್, ಗಿರೀಶ್, ಬಸವರಾಜು ಇತರರು ಹಾಜರಿದ್ದರು.

# ದೇಶದ ಭವಿಷ್ಯಕ್ಕಾಗಿ ಯುವಜನರು ಸಕಲ ತ್ಯಾಗಗಳಿಗೂ ಸಿದ್ಧರಿರಬೇಕು




ದೇಶದ ಭವಿಷ್ಯದ ದೃಷ್ಟಿಯಿಂದ ಯುವಜನರು ಸಕಲ ತ್ಯಾಗಗಳಿಗೂ ಸನ್ನದ್ಧರಾಗಿ ಇರಬೇಕೆಂದು ತಿಳಿಸುತ್ತಾ, ಭಗತ್ ಸಿಂಗ್ ರಾಜಗುರು, ಸುಖದೇವ್ ಅವರು ನಿಮ್ಮೆಲ್ಲರಿಗೂ ಪ್ರೇರಣೆಯಾಗಲಿ ಎಂದು ನಿವೃತ್ತ ಸೈನಿಕರಾದ ಶ್ರೀ ತಿಮ್ಮೇಗೌಡ ಅವರು ತಿಳಿಸಿದರು. ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ತಿನ ವತಿಯಿಂದ ಬಲಿದಾನ ದಿವಸ್ ಅಂಗವಾಗಿ ಆರ್ಯ ಭಾರತಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ 26. 3.2026 ರಂದು ರಕ್ತದಾನ ಶಿಬಿರ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕಾರ್ಯಕ್ರಮದ ಪ್ರಾಸ್ತವಿಕ ನುಡಿಗಳನ್ನಾಡಿದ ರಾಜ್ಯ ಕಾರ್ಯದರ್ಶಿಗಳಾದ ಗೋಪಿ ರಂಗಸ್ವಾಮಿರವರು ಕಳೆದ ಅನೇಕ ವರ್ಷಗಳಿಂದ ವಿದ್ಯಾರ್ಥಿ ಪರಿಷತ್ ಸ್ವತಂತ್ರ ಹೋರಾಟಗಾರರ, ಮಹನೀಯರ, ವಿಚಾರಗಳ ತ್ಯಾಗ ಸೇವಾ ಮನೋಭಾವಗಳನ್ನು ವಿದ್ಯಾರ್ಥಿಗಳಲ್ಲಿ ಮನಮುಟ್ಟುವಂತೆ ಕಾರ್ಯಕ್ರಮಗಳನ್ನು ಮಾಡುತ್ತಾ ಬರುತ್ತಿದೆ. ವಿದ್ಯಾರ್ಥಿಗಳು ರಾಷ್ಟ್ರದ ಪುನರ್ ನಿರ್ಮಾಣದ ಕೆಲಸದಲ್ಲಿ ವಿದ್ಯಾರ್ಥಿಗಳು ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಡಾ. ಸಂಜಯ್ ರಾಜ್ ಅವರು ಜೀವನದಲ್ಲಿ ಯಶಸ್ಸು ಸಾಧಿಸಲು ವಿದ್ಯಾರ್ಥಿಗಳ ಮನೋಭೂಮಿಕೆ ಅತ್ಯಂತ ಮಹತ್ವದ ಪಾತ್ರವನ್ನು ವಹಿಸುತ್ತದೆ. ವಿದ್ಯಾರ್ಥಿಗಳು ಸದಾ ಕ್ರಿಯಾಶೀಲರಾಗಿ ಹಾಗೂ ಸೇವಾ ಮನೋಭಾವ ರೂಡಿಸಿಕೊಳ್ಳಬೇಕೆಂದು ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಡಾಕ್ಟರ್ ಆರ್. ಹರೀಶ್ ಕುಮಾರ್ ರವರು ರಕ್ತದಾನದ ಮಹತ್ವವನ್ನು ತಿಳಿಸಿ ಭಗತ್ ಸಿಂಗ್ ರವರ ಜೀವನ ಭಾರತೀಯ ಯುವಜನರ ಪಾಲಿಗೆ ಸ್ಫೂರ್ತಿಯ ಚಿಲುಮೆ ಎಂದು ತಿಳಿಸಿದರು.

ಕಾರ್ಯಕ್ರಮವನ್ನು ಶ್ರೀ ಸ್ವಾಮಿ ವಿವೇಕಾನಂದ ಹಾಗೂ ತಾಯಿ ಸರಸ್ವತಿ ದೇವಿಗೆ ಪುಷ್ಪಾರ್ಚನೆ, ದೀಪ ಪ್ರಜ್ವಲನೆ ಹಾಗೂ ಸಾಮೂಹಿಕವಾಗಿ ವಂದೇ ಮಾತರಂ ಹಾಡುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿ ಪರಿಷತ್ ಕಾರ್ಯಕರ್ತರಾದ ಗೋವಿಂದರಾಜ್, ವರಲಕ್ಷ್ಮಿ, ಗುರುಪ್ರಸಾದ್ ಗೌಡ ಕಾಲೇಜಿನ ಉಪನ್ಯಾಸಕರು ಬೋಧಕೇತರ ವರ್ಗದವರು ಹಾಗೂ ಉಪಸ್ಥಿತರಿದ್ದರು.

## ಇಂದು ಶ್ರೀರಾಮನವಮಿ ಸಂಭ್ರಮ : ಚಿಕ್ಕಪೇಟೆಯ ವಾಸವಿ ಮಂದಿರದಲ್ಲಿ ಭವ್ಯ ಆಚರಣೆ

ತುಮಕೂರು: ನಗರದ ಚಿಕ್ಕಪೇಟೆಯಲ್ಲಿರುವ ವಾಸವಿ ಪ್ರಾರ್ಥನ ಮಂದಿರದಲ್ಲಿ ಮಾರ್ಚ್. 27 ರಂದು ಶ್ರೀರಾಮನವಮಿ ಆಯೋಜಿಸಲಾಗಿದೆ.ಆರ್ಯ ವೈಶ್ಯ ಮಂಡಳಿ (ರಿ.), ಶ್ರೀಮತ್ ಕನ್ನಿಕಾಪರಮೇಶ್ವರಿ ದೇವಸ್ಥಾನ ಸಮಿತಿ (ರಿ.) ಹಾಗೂ ಆರ್ಯ ವೈಶ್ಯ ಶ್ರೀರಾಮ ಸೇವಾ ಸಮಿತಿ ಸಹಯೋಗದಲ್ಲಿ 17ನೇ ವರ್ಷದ ಸಂಭ್ರಮಾಚರಣೆ ನಡೆಯಲಿದೆ.

ಮಾ.27 ಶುಕ್ರವಾರ ಬೆಳಿಗ್ಗೆ 6 ಗಂಟೆಯಿಂದ ವಿವಿಧ ಧಾರ್ಮಿಕ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಗುತ್ತದೆ. ಸುಪ್ರಭಾತ ಸೇವೆ, ಕುಲದೇವಿ ವಾಸವಿ ಹಾಗೂ ಪರಿವಾರ ದೇವರುಗಳಿಗೆ ಅಭಿಷೇಕ ಪೂಜೆ, ಗಣಪತಿ ಪೂಜೆ, ಗೋಪೂಜೆ, ಸಂಕಲ್ಪ, ಕಲಶ ಸ್ಥಾಪನೆ, ಶ್ರೀರಾಮ ಹಾಗೂ ಪರಿವಾರ ದೇವರ ಉತ್ಸವ ಮತ್ತು ಶ್ರೀರಾಮ ತಾರಕ ಹೋಮ ನಡೆಯಲಿದೆ.

ಮಧ್ಯಾಹ್ನ 12 ಗಂಟೆಗೆ ವಿವಿಧ ಭಜನಾ ತಂಡಗಳಿಂದ ಹನುಮಾನ್ ಚಾಲೀಸ ಪಠಣ ಕಾರ್ಯಕ್ರಮ ನಡೆಯಲಿದೆ. ಸಂಜೆ 5.30ಕ್ಕೆ ಶ್ರೀ ಸೀತಾರಾಮ ಕಲ್ಯಾಣ ಮತ್ತು ಶ್ರೀರಾಮ ಪಟ್ಟಾಭಿಷೇಕ ಮಹೋತ್ಸವವು ನೆರವೇರಲಿದೆ.ಇದಾದ ಬಳಿಕ ಸಂಜೆ 7.30ಕ್ಕೆ ಅಭಿನಂದನಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಸಮಿತಿ ತಿಳಿಸಿದೆ.

ಈ ಕಾರ್ಯಕ್ರಮಕ್ಕೆ ವೈಶ್ಯ ಕೋ-ಆಪರೇಟಿವ್ ಬ್ಯಾಂಕ್ ಲಿ., ವಾಸವಿ ಮಹಿಳಾ ಮಂಡಲಿ, ವಾಸವಿ ಯುವಜನ ಸಂಘ, ವಾಸವಿ ಭಜನಾ ಮಂಡಲಿ ಸೇರಿದಂತೆ ವಿವಿಧ ಸಂಘಟನೆಗಳು ಸಹಕಾರ ನೀಡಿವೆ. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಧಾರ್ಮಿಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಆರ್ಯವೈಶ್ಯ ಶ್ರೀ ರಾಮ ಸೇವಾ ಸಮಿತಿ ಅಧ್ಯಕ್ಷರಾದ ಬಿ. ಅಮರ್ನಾಥ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭೀಮ್ ಆರ್ಮಿ ಸಂಘಟನೆಯ ಜಿಲ್ಲಾಧ್ಯಕ್ಷರಾಗಿ ಕೊರಟಗೆರೆ ಗೋಪಾಲಕೃಷ್ಣ ನೇಮಕ

ಸಂಘಟನೆಯ ಹೆಸರು ದುರುಪಯೋಗ ಪಡಿಸಿಕೊಂಡರೆ ಕಾನೂನು ಕ್ರಮ



ಕೊರಟಗೆರೆ : ತುಮಕೂರು ಜಿಲ್ಲೆಯ ಭೀಮ್ ಆರ್ಮಿ ಸಂಘಟನೆಯ ನೂತನ ಜಿಲ್ಲಾಧ್ಯಕ್ಷರಾಗಿ ಕೊರಟಗೆರೆಯ ಗೋಪಾಲಕೃಷ್ಣ (ಏರ್ಟೆಲ್ ಗೋಪಿ) ಅವರನ್ನು ಸಂಸ್ಥಾಪಕ ರಾಷ್ಟ್ರೀಯ ಅಧ್ಯಕ್ಷರಾದ ವಿನಯ್ ಕುಮಾರ್ ಆಜಾದ್ ಅಧಿಕೃತವಾಗಿ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಆಯೋಜಿಸಲಾಗಿದ್ದ ಸುದ್ದಿಗೋಷ್ಠಿಯಲ್ಲಿ ಈ ವಿಷಯವನ್ನು ತಿಳಿಸಲಾಯಿತು. ಇದೇ ವೇಳೆ ಸಂಘಟನೆಯ ಭವಿಷ್ಯದ ಗುರಿ ಮತ್ತು ಉದ್ದೇಶಗಳ ಕುರಿತು ನೂತನ ಜಿಲ್ಲಾಧ್ಯಕ್ಷ ಗೋಪಾಲಕೃಷ್ಣ ಸವಿಸ್ತಾರವಾಗಿ ಮಾತನಾಡಿದರು.

ದಲಿತರ ಪರ ಹೋರಾಟ ನಡೆಸಿ ದಲಿತರಿಗೆ ನ್ಯಾಯ ಕೊಡಿಸುವುದೇ ಭೀಮ್ ಆರ್ಮಿ ಸಂಘಟನೆಯ ಮೂಲ ಉದ್ದೇಶವಾಗಿದೆ ಎಂದು ಗೋಪಾಲಕೃಷ್ಣ ತಿಳಿಸಿದರು. ಅಲ್ಲದೇ, ಭೀಮ್ ಆರ್ಮಿ ಸಂಘಟನೆಯ ಹೆಸರನ್ನು ಯಾರಾದರೂ ದುರುಪಯೋಗಪಡಿಸಿಕೊಂಡರೆ ಅವರ ವಿರುದ್ಧ ಕಟ್ಟುನಿಟ್ಟಿನ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಯಾವುದೇ ಕಾರ್ಖಾನೆ ಅಥವಾ ಸರ್ಕಾರಿ ಇಲಾಖೆಗಳ ಅಧಿಕಾರಿಗಳಿಗೆ ಭೀಮ್ ಆರ್ಮಿ ಸಂಘಟನೆಯ ಹೆಸರಿನಲ್ಲಿ ಯಾರಾದರೂ ಬೆದರಿಕೆ ಹಾಕುತ್ತಿದ್ದರೆ, ತಕ್ಷಣವೇ ಪೊಲೀಸರಿಗೆ ದೂರು ನೀಡುವಂತೆ ಅವರು ಮನವಿ ಮಾಡಿದರು. ಅಂತಹವರ ವಿರುದ್ಧ ಸಂಘಟನೆಯೇ ಖುದ್ದಾಗಿ ದೂರು ದಾಖಲಿಸಲಿದೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

ಇನ್ನೂ ತುಮಕೂರು ಜಿಲ್ಲೆಯ ಹತ್ತು ತಾಲೂಕುಗಳಲ್ಲಿ ಸಂಘಟನೆಯನ್ನು ಬಲಪಡಿಸಲು ಪ್ರಮುಖ ಆದ್ಯತೆ ನೀಡಲಾಗುವುದು. ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಆಶಯದಂತೆ ಜಿಲ್ಲೆಯಲ್ಲಿ ಸಂಘಟನೆಯು ನ್ಯಾಯಯುತವಾಗಿ ಕೆಲಸ ಮಾಡಲಿದೆ. ಕರ್ನಾಟಕದ ಯಾವುದೇ ಮೂಲೆಯಲ್ಲಿ ದಲಿತರಿಗೆ ಅನ್ಯಾಯವಾದರೂ ಸಂಘಟನೆ ಧ್ವನಿಯಾಗಲಿದೆ ಎಂದು ಭರವಸೆ ನೀಡಿದರು.

"ದಲಿತ ಪರ ಸಂಘಟನೆ ಮತ್ತು ಕನ್ನಡಪರ ಹೋರಾಟಗಳಲ್ಲಿ ನಾನು ಸಕ್ರಿಯವಾಗಿ ತೊಡಗಿಸಿಕೊಂಡಿದ್ದರ ಫಲವಾಗಿ ಇಂದು ನನಗೆ ಭೀಮ್ ಆರ್ಮಿ ಸಂಘಟನೆಯಲ್ಲಿ ಜಿಲ್ಲಾಧ್ಯಕ್ಷ ಸ್ಥಾನ ಲಭಿಸಿದೆ," ಎಂದು ನೂತನ ಜಿಲ್ಲಾಧ್ಯಕ್ಷ ಗೋಪಾಲಕೃಷ್ಣ ತಮ್ಮ ಅನಿಸಿಕೆ ಹಂಚಿಕೊಂಡರು. ಈ ಸುದ್ದಿಗೋಷ್ಠಿಯಲ್ಲಿ ಕೆಂಗನಪಾಳ್ಯ ನವೀನ್ ಕುಮಾರ್,ಮಧುಗಿರಿ ಚಿರಂಜೀವಿ,ಶಂಕರ್, ಮಂಜುನಾಥ್,ಹರ್ಷ, ಕಿಶನ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

## ತಿಪಟೂರು : : ಭಗತ್ ಸಿಂಗ್ ಯುವ ಸೇನೆಯಿಂದ ಗೌರವ ನಮನ



ತಿಪಟೂರು : ನಗರದ ಸಿಂಗ್ರಿ ನಂಜಪ್ಪ ವೃತ್ತದ ಬಳಿ ಕ್ರಾಂತಿಕಾರಿ ಭಗತ್ ಸಿಂಗ್ ಯುವ ಸೇನೆ ವತಿಯಿಂದ ಸ್ವಾತಂತ್ರ್ಯ ಹೋರಾಟಗಾರಿಗೆ ಪುಷ್ಪ ನಮನ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಸ್ವಾತಂತ್ರ್ಯ ಹೋರಾಟದ ಮಹಾನ್ ಕ್ರಾಂತಿಕಾರರಾದ ಭಗತ್‌ಸಿಂಗ್, ರಾಜ್‌ಗುರು, ಸುಖದೇವ್ ಅವರ ಸ್ಮರಣಾರ್ಥ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಘೋಷಣೆಗಳನ್ನು ಕೂಗಲಾಯಿತು.

ದೇಶದ ಸ್ವಾತಂತ್ರ್ಯಕ್ಕಾಗಿ ತಮ್ಮ ಪ್ರಾಣ ತ್ಯಾಗ ಮಾಡಿದ ಮಹಾನ್ ಯೋಧರ ತ್ಯಾಗ ಮತ್ತು ದೇಶ ಭಕ್ತಿಯನ್ನು ಸ್ಮರಿಸಿ ಕಾರ್ಯಕ್ರಮದಲ್ಲಿ ಭಾಗವಹಿಸಿದವರು ಗೌರವ ಸೂಚಿಸಿದರು.

ಈ ಸಂದರ್ಭದಲ್ಲಿ ನಿವೃತ್ತ ಎಸಿಪಿ ಲೋಕೇಶ್ವರ್, ವಿಶ್ವ ಹಿಂದೂ ಪರಿಷತ್ ಜಿಲ್ಲಾಧ್ಯಕ್ಷ ಬಾಳೇಕಾಯಿ ನಟರಾಜು, ಶ್ರೀನಿವಾಸ್, ನಗರಸಭೆ ಮಾಜಿ ಉಪಾಧ್ಯಕ್ಷ ಸೊಪ್ಪು ಗಣೇಶ್, ಗೋರಕ್ಷಕ ಮಡೆನೂರು ವಿನಯ್, ನಾಗರಾಜು, ಕೃಷ್ಣ ಶಿವಾಜಿ, ಮಧು, ಮಾವಿನ ತೋಪು ಕೃಷ್ಣ, ಬೈರೇಶ್, ಮದನ್, ಭಗತ್, ಗೋವಿಂದರಾಜು, ಲೋಕೇಶ್, ಮಂಜುನಾಥ್ ಸೇರಿದಂತೆ ಅನೇಕರು ಹಾಜರಿದ್ದರು.

## ಕ್ಷಯ ಮುಕ್ತವಾಗುವತ್ತ ಭಾರತದ ಚಿತ್ತ: ಸಮುದಾಯ ಆರೋಗ್ಯ ಅಧಿಕಾರಿ ಉಮಾದೇವಿ



ಮಧುಗಿರಿ: ದೇಶವನ್ನು ಕ್ಷಯ ಮುಕ್ತವಾಗಿಸುವ ನಿಟ್ಟಿನಲ್ಲಿ ದೇಶದಾದ್ಯಂತ ನೂರು ದಿನಗಳ ಕ್ಷಯ ರೋಗ ಪತ್ತೆ ಹಚ್ಚುವ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಜನ ವಸತಿ ಪ್ರದೇಶಗಳಿಗೆ ತೆರಳಿ ರೋಗ ಲಕ್ಷಣಗಳ ಬಗ್ಗೆ ಮಾಹಿತಿ ನೀಡಿ ಟಿಬಿ ಸ್ಕ್ರೀನಿಂಗ್ ನಡೆಸಲಾಗುತ್ತಿದೆ ಎಂದು ಸಮುದಾಯ ಆರೋಗ್ಯ ಅಧಿಕಾರಿ ಉಮಾದೇವಿ ತಿಳಿಸಿದರು.

ತಾಲ್ಲೂಕಿನ ದೊಡ್ಡೇರಿ ಹೋಬಳಿಯ ಮಲ್ಲೇನಹಳ್ಳಿ ಗೊಲ್ಲರ ಹಟ್ಟಿ, ಗ್ರಾಮದಲ್ಲಿ ಆಯೋಜಿಸಿದ್ದ ವಿಶ್ವ ಕ್ಷಯ ರೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ಕ್ಷಯ ಮುಕ್ತ ಭಾರತ ಅಭಿಯಾನದಡಿ ಕಳೆದ ಒಂದು ದಶಕದಲ್ಲಿ ಕ್ಷಯ ರೋಗಿಗಳ ಸಂಖ್ಯೆ ಗಣನೀಯವಾಗಿ ಇಳಿಕೆಯಾಗಿದ್ದು, ಪ್ರಸ್ತುತ ಒಂದು ಲಕ್ಷ ಜನಸಂಖ್ಯೆಗೆ ಟಿಬಿ ಪ್ರಮಾಣ 187ಕ್ಕೆ ಕುಸಿದಿದೆ. ಚಿಕಿತ್ಸೆಯ ಯಶಸ್ಸು ಇದಕ್ಕೆ ಕಾರಣವಾಗಿದೆ ನಮ್ಮ ಇಲಾಖಾವತಿಯಿಂದ ನಡೆಸುವ ಇಂತಹ ಅಭಿಯಾನದಲ್ಲಿ ಆರೋಗ್ಯ ಇಲಾಖೆ ಸಿಬ್ಬಂದಿಯೊಂದಿಗೆ ಸ್ಥಳೀಯ ಆಡಳಿತ, ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಮಹತ್ವದ ಪಾತ್ರ ವಹಿಸುತ್ತಿದ್ದು ,ನಾಗರಿಕರು ಸಹಕಾರ ನೀಡಿದರೆ ರೋಗದ ಪ್ರಮಾಣವನ್ನು ಶೂನ್ಯಕ್ಕೆ ಇಳಿಸಬಹುದು ಎಂದರು.

ಈ ಸಂದರ್ಭದಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಉಮೇಶ್, ಶಶಿಕುಮಾರ್, ಆಶಾ ಕಾರ್ಯಕರ್ತೆಯರಾದ ರೂಪ,ಕಮಲ, ಹೇಮಲತ, ರತ್ನಮ್ಮ ಹಾಗೂ ಇನ್ನಿತರರು ಇದ್ದರು.

# ಬಡವರು, ಶೋಷಿತರ ಪರ ಹೋರಾಡಿದ ಜಿ.ಎಂ.ಸಣ್ಣಮುದ್ದಯ್ಯ




ಮಧುಗಿರಿ ಉಪ ವಿಭಾಗಾಧಿಕಾರಿಗಳ ಕಛೇರಿಯಲ್ಲಿ ವೃತ್ತಿ ಜೀವನ ಆರಂಭಿಸಿದ ಸಣ್ಣಮುದ್ದಯ್ಯನವರು ಪ್ರಾರಂಭಿಕ ದಿನಗಳಿಂದ ಬಡವರು, ಶೋಷಿತರ ಪರ ಧ್ವನಿಯಾಗಿದ್ದರು ಎಂದು ಜಿಲ್ಲಾ ಕಸಾಪ ಅಧ್ಯಕ್ಷ ಕೆ.ಎಸ್.ಸಿದ್ಧಲಿಂಗಪ್ಪ ತಿಳಿಸಿದರು.

ಅವರು ಕನ್ನಡ ಭವನದಲ್ಲಿ ಜಿಲ್ಲಾ ಕಸಾಪ ವತಿಯಿಂದ ಏರ್ಪಡಿಸಿದ್ದ ಸಣ್ಣಮುದ್ದಯ್ಯನವರ ನುಡಿನಮನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ತಮ್ಮ ದೈನಂದಿನ ಕೆಲಸ ಕಾರ್ಯಗಳು, ಪ್ರಮಾಣ ಪತ್ರಗಳಿಗಾಗಿ ಬರುತ್ತಿದ್ದ ಗ್ರಾಮೀಣ ರೈತರಿಗೆ ಅಲೆದಾಡಿಸದೆ ತಕ್ಷಣ ಕೆಲಸ ಮಾಡಿಕೊಡುತ್ತಿದ್ದರು ಎಂದು ತಿಳಿಸಿದರು.

ಸಣ್ಣಮುದ್ದಯ್ಯನವರ ಸಮಾಜಮುಖಿ ಕೆಲಸಗಳನ್ನು ಕುರಿತು ಜಿಲ್ಲಾ ಕಸಾಪ ಸಂಚಾಲಕರಾದ ಕೆ.ಎಸ್.ಉಮಾಮಹೇಶ್ ಮಾತನಾಡಿ, 2002ರಲ್ಲಿ ತುಮಕೂರಿನಲ್ಲಿ ನಡೆದ ಅಖಿಲ ಭಾರತ ಸಾಹಿತ್ಯ ಸಮ್ಮೇಳನ ನೆನೆಗುದಿಗೆ ಬಿದ್ದಾಗ ನೌಕರ ಸಂಘದ ವತಿಯಿಂದ ಪ್ರೇರಕ ಶಕ್ತಿಯಾಗಿ ನಿಂತರು. ಸರ್ಕಾರಿ ನೌಕರರ ಭವನದಲ್ಲಿಯೇ ಪೂರ್ವಸಿದ್ಧತಾ ಸಭೆ ನಡೆಸಿದರು. ಜಿಲ್ಲೆಯ ಸಚಿವರುಗಳಾದ ಟಿ.ಬಿ.ಜಯಚಂದ್ರ ಹಾಗೂ ಡಾ. ಜಿ.ಪರಮೇಶ್ವರ್ ಅವರಿಗೆ ಸಹಕಾರದ ಭರವಸೆ ನೀಡಿ ಸಾಹಿತ್ಯ ಸಮ್ಮೇಳನದ ಕೆಲಸಗಳಿಗೆ ಚಾಲನೆ ನೀಡುವುದರ ಜೊತೆಗೆ ಜಿಲ್ಲೆಯ ಎಲ್ಲಾ ನೌಕರರ ಒಂದು ದಿನದ ವೇತನವನ್ನು ನೀಡಲು ಶ್ರಮವಹಿಸಿ ಸಮ್ಮೇಳನದ ಯಶಸ್ಸು ಹಾಗೂ ಕನ್ನಡ ಭವನ ನಿರ್ಮಾಣಕ್ಕೂ ಸ್ಫೂರ್ತಿಯಾದರು ಎಂದು ತಿಳಿಸಿದರು.

ಹಿರಿಯ ರಂಗಭೂಮಿ ಕಲಾವಿದರಾದ ಡಾ. ಲಕ್ಷ್ಮಣದಾಸ್ ಮಾತನಾಡಿ ಸಣ್ಣಮುದ್ದಯ್ಯನವರು ಐದುಬಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದುದಲ್ಲದೆ ರಾಜ್ಯ ಸಮಿತಿಯ ಗೌರವಾಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ. ಅವರು ಸಾಹಿತಿ, ಕಲಾವಿದರ ಬಗ್ಗೆ ಅಪಾರವಾದ ಗೌರವವನ್ನು ಹೊಂದಿದ್ದರು ಎಂದು ತಿಳಿಸಿದರು.

ಜಾನಪದ ಅಕಾಡೆಮಿಯ ಸದಸ್ಯ ಹಾಗೂ ಗಾಯಕರಾದ ಮಲ್ಲಿಕಾರ್ಜುನ ಕೆಂಕೆರೆ ಮಾತನಾಡಿ ನಿಧನದ ಹಿಂದಿನ ದಿನ ತಮ್ಮೊಂದಿಗೆ ಮುದ್ದಯ್ಯನವರು ನಡೆಸಿದ ಚರ್ಚೆಯನ್ನು ಉಲ್ಲೇಖಿಸಿ ಸದಾ ನಗುಮೊಗದ ಸ್ವಭಾವ ಅವರದು ಎಂದು ತಿಳಿಸಿ, ಇಷ್ಟು ಬೇಗ ಬಂದ ಅವರ ಸಾವಿನ ಸುದ್ದಿ ಎಲ್ಲರಿಗೂ ಅಘಾತವನ್ನುಂಟುಮಾಡಿದೆ ಎಂದು ತಿಳಿಸಿದರು.

ಶ್ರೀಮತಿ ಸುನಂದಮ್ಮ, ಜಿ.ಹೆಚ್.ಮಹದೇವಪ್ಪ, ಇಂಜಿನಿಯರ್ ಸಂಘದ ಅಧ್ಯಕ್ಷರಾದ ಜಿ.ಎನ್. ರಾಧಾಕೃಷ್ಣ, ಗೌ.ತಿ.ರಂಗನಾಥ್, ಬಿ.ರಾಜಶೇಖರ್, ಚಿಕ್ಕಬೆಳ್ಳಾವಿ ಶಿವಕುಮಾರ್, ಮರಿಯಂಬಿ ಮೊದಲಾದವರು ಉಪಸ್ಥಿತರಿದ್ದರು.

ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ಡಾ. ಕೆ.ಸಣ್ಣಹೊನ್ನಯ್ಯ ಕಂಟಲಗೆರೆ ಕಾರ್ಯಕ್ರಮ ನಿರ್ವಹಿಸಿದರು. ಸಮಾರಂಭಕ್ಕೂ ಮುನ್ನ ಸಣ್ಣಮುದ್ದಯ್ಯನವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು.

## ರಂಗ ಸಂದೇಶ ವಾಚನದೊಂದಿಗೆ ವಿಶ್ವರಂಗಭೂಮಿ ದಿನಾಚರಣೆ

ನಗರದಡಾ.ಗುಬ್ಬಿವೀರಣ್ಣಕಲಾಕ್ಷೇತ್ರದಲ್ಲಿ'ವಿಶ್ವರಂಗಭೂಮಿ ದಿನಾಚರಣೆ– 2026' ನ್ನುಆಚರಿಸಲಾಗುವುದು. 2026ರ ರಂಗಸಂದೇಶ ವಾಚನದೊಂದಿಗೆ ಪ್ರಾರಂಭವಾಗುವ ವಿಶ್ವರಂಗಭೂಮಿ ದಿನಾಚರಣೆ– 2026ರ ಕಾರ್ಯಕ್ರಮವನ್ನುತುಮಕೂರು ವಿಶ್ವವಿದ್ಯಾನಿಲಯದ ಉಪವಿಭಾಗಾಧಿಕಾರಿಗಳು ಹಾಗು ಮಾನ್ಯಕುಲಸಚಿವರುಆದಶ್ರೀಮತಿನಾಹಿದಾಜಮ್‌ಜಮ್, ಕೆ.ಎ.ಎಸ್. ರವರುಉದ್ಘಾಟಿಸಲಿದ್ದು, ಸಮಾರಂಭದಅಧ್ಯಕ್ಷತೆಯನ್ನು ವಿಶ್ವವಿದ್ಯಾನಿಲಯ ಕಲಾ ಕಾಲೇಜು, ತುಮಕೂರು ಪ್ರಾಂಶುಪಾಲರಾದಡಾ.ದಾಕ್ಷಾಯಿಣಿಜಿ. ರವರು ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಡಾ.ಓ.ನಾಗರಾಜು, ಪ್ರಾಧ್ಯಾಪಕರು ಹಾಗು ಕವಿಗಳು, ತುಮಕೂರು, ಶಶಿ ಹುಲಿಕುಂಟೆಮಠ್, ಸಮಾಜ ಸೇವಕರು, ತುಮಕೂರು, ಈಶ್ವರ್ ಕೆ.ಮಿರ್ಜಿ, ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ತುಮಕೂರು ಮತ್ತುಡಾ.ಮಹಾಲಿಂಗ, ಅಧ್ಯಕ್ಷರು, ರಾಜ್ಯಶಾಸ್ತ್ರ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ ರವರುಗಳು ಭಾಗವಹಿಸಲಿದ್ದಾರೆ.

ನಂತರ"ಶಿಕ್ಷಣದಲ್ಲಿ ರಂಗಭೂಮಿಯ ಪ್ರಾಮುಖ್ಯತೆ" ಎಂಬ ವಿಷಯದ ಮೇಲೆ ವಿಚಾರ ಸಂಕಿರಣವಿದ್ದು ಈ ಕಾರ್ಯಕ್ರಮದಲ್ಲಿ ಪ್ರೊ.ಮೋಹನ್ ಹೆಚ್.ಎಸ್. ಮಾನ್ಯ ಕುಲಸಚಿವರು, ಪರೀಕ್ಷಾಂಗ, ತುಮಕೂರು ವಿಶ್ವವಿದ್ಯಾನಿಲಯ, ಡಾ.ಶಿವಣ್ಣ ತಿಮ್ಲಾಪುರ, ಕವಿಗಳು, ತುಮಕೂರು ಮತ್ತುಡಾ.ರಾಜಣ್ಣಎಸ್.ಪಿ., ನಿವೃತ್ತ ಪ್ರಾಂಶುಪಾಲರು, ಡಯಟ್, ತುಮಕೂರು –ಇವರುಗಳು ವಿಚಾರ ಸಂಕಿರಣದಲ್ಲಿ ವಿಷಯ ಮಂಡನೆ ಮಾಡಲಿದ್ದಾರೆ. ನಂತರ ಪೂರ್ಣಿಮಾ ಪವಾರ್‌ರವರ ನಿರ್ದೇಶನದಲ್ಲಿಚಂದ್ರಗುಪ್ತ ಮೌರ್ಯನ ಪಟ್ಟದರಸಿಯ ಕಥಾವಸ್ತು ಹೊಂದಿರುವ "ಧ್ರುವಸ್ವಾಮಿನಿ" ಎಂಬ ಐತಿಹಾಸಿಕ ನಾಟಕ ಪ್ರಯೋಗಗೊಳ್ಳಲಿದೆ.

ವಿಶೇಷದಿನವಾಗಿರುವ ವಿಶ್ವರಂಗಭೂಮಿ ದಿನಾಚರಣೆ–2026, ಇದೇ ಶುಕ್ರವಾರ ಮಾರ್ಚ್ 27ರಂದು ಬೆಳಗ್ಗೆ 11 ಕ್ಕೆ ತುಮಕೂರು ನಗರದಡಾ. ಗುಬ್ಬಿವೀರಣ್ಣಕಲಾಕ್ಷೇತ್ರದಲ್ಲಿ ನಾಟಕಮನೆತುಮಕೂರುರಂಗಸಂಘಟಕರು, ಸಾಂಸ್ಕೃತಿಕಚಿಂತಕರು, ರಂಗನಟರು, ನಿರ್ದೇಶಕರು ಹಾಗು ರಂಗಾಸಕ್ತ ಬಂಧುಗಳು ಎಲ್ಲರೂ ಸೇರಿ ಪ್ರತೀ ವರ್ಷದಂತೆ ಈ ಬಾರಿಯೂ

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಶ್ರೀದೇವಿ ಕಾಲೇಜಿನ ಶ್ರೀಉತ್ಸವ ವಾರ್ಷಿಕೋತ್ಸವ : ತಾಂತ್ರಿಕ ವಿಶ್ವವಿದ್ಯಾಲಯ ಪಠ್ಯಕ್ರಮ ಜಗತ್ತಿಗೆ ಮಾದರಿ: ಪ್ರೊ.ಎಸ್.ವಿದ್ಯಾಶಂಕರ್




ತುಮಕೂರು: ಬೆಳಗಾವಿಯ ತಾಂತ್ರಿಕ ಶಿಕ್ಷಣ ವಿಶ್ವವಿದ್ಯಾಲಯದ ಬೋಧನಾ ಮತ್ತು ಪಠ್ಯಕ್ರಮ ಜಗತ್ತಿಗೆ ಮಾದರಿಯಾಗಿದೆ ಎಂದು ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಗೌರವಾನ್ವಿತ ಕುಲಪತಿಯಾದ ಪ್ರೊ.ವಿದ್ಯಾಶಂಕರ್.ಎಸ್. ರವರು ಅಭಿಪ್ರಾಯಪಟ್ಟಿದ್ದಾರೆ.

ನಗರದ ಶಿರಾರಸ್ತೆಯ ಶ್ರೀದೇವಿ ತಾಂತ್ರಿಕ ಮಹಾವಿದ್ಯಾಲಯದ ವತಿಯಿಂದ ಮಾರ್ಚ್ 26 ರಂದು ಗುರುವಾರ ಬೆಳಿಗ್ಗೆ 10 ಗಂಟೆಗೆ ಶ್ರೀದೇವಿ ಕಾಲೇಜಿನ ಆವರಣದಲ್ಲಿ ಶ್ರೀಉತ್ಸವ ವಾರ್ಷಿಕೋತ್ಸವ–2026 ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿದ್ದ ಪ್ರೊ.ವಿದ್ಯಾಶಂಕರ್.ಎಸ್.ರವರು ಮಾತನಾಡುತ್ತಾ ಕೃತಕ ಬುದ್ಧಿಮತ್ತೆ ಬೆಳೆದಷ್ಟು ಉದ್ಯೋಗಾವಕಾಶಗಳು ಕಡಿಮೆಯಾಗಲಿದೆ. ಎಂಬ ಆತಂಕದಲ್ಲಿ ಸತ್ಯಾಂಶವಿಲ್ಲ ಆದರೆ ಕೃತಕ ಬುದ್ಧಿಮತ್ತೆಯನ್ನು ಮೀರಿ ಬೆಳೆಯುವಂತಹ ಅವಕಾಶಗಳನ್ನು ನಾವು ಸೃಷ್ಟಿಸಿಕೊಳ್ಳದೆ ಹೋದಲ್ಲಿ ಮನುಷ್ಯ ಬೇಡವಾದ ವಸ್ತುವಾಗುತ್ತಾನೆ ಎಂಬುದನ್ನು ನೆನಪಿನಲ್ಲಿಟ್ಟುಕೊಳ್ಳಬೇಕು. ಹೀಗಾಗಿ 2030ರ ವೇಳೆಗೆ ಕೃತಕ ಬುದ್ಧಿಮತ್ತೆಯನ್ನು ನಿಯಂತ್ರಿಸುಲು ಇಂದಿನಿಂದಲೇ ನಮ್ಮ ಪ್ರಯತ್ನಗಳನ್ನು ಮತ್ತು ಹೊಸ ಹೊಸ ಅಲೋಚನೆ, ಸಂಶೋಧನೆ ಮತ್ತು ನಾವೀನ್ಯತೆಗೆ ಹೆಚ್ಚು ಗಮನಕೊಡಬೇಕು. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಪಠ್ಯಕ್ರಮ ಶೈಕ್ಷಣಿಕ ಕ್ರಮಕ್ರಮ ಅಂತಾರಾಷ್ಟ್ರೀಯ ಮಟ್ಟದಲ್ಲಿ ಶ್ರೇಷ್ಠವಾಗಿದೆ. ಹೀಗಾಗಿ ನಮಗೆ ಮಾನ್ಯತೆ ಕೊಡಿ ಎಂದು. ಸೌದಿಅರೇಬಿಯಾ, ಅಸ್ಟ್ರೇಲಿಯಾ, ದಕ್ಷಿಣ ಅಮೇರಿಕಾ ಸೇರಿದಂತೆ ಜಗತ್ತಿನ ಹಲವು ರಾಷ್ಟ್ರಗಳು ಮನವಿ ಮಾಡುತ್ತಿವೆ. ಬರುವ 2030ರ ವೇಳೆಗೆ ಇಂಜಿನಿಯರಿಂಗ್ ಕ್ಷೇತ್ರದಲ್ಲಿ ಈಗ ಮಾಡುತ್ತಿರುವ ಕೆಲಸಗಳು ಇರುವುದಿಲ್ಲ ಬದಲಾಗಿ ಹೊಸ ಹೊಸ ಉದ್ಯೋಗಗಳು ಹುಟ್ಟಿಕೊಳ್ಳುತ್ತವೆ. ಜಗತ್ತಿನಲ್ಲಿ ಜ್ಞಾನಕ್ಕಿಂತ ದೊಡ್ಡದು ಯಾವುದೂ ಇಲ್ಲ ವಿದ್ಯಾರ್ಥಿಗಳು ಗುರಿಯೊಂದಿಗೆ ಜ್ಞಾನ ಸಂಪಾದನೆ–ಸಾಧನೆಗೆ ಗಮನ ಕೊಡಬೇಕು. ಸಿನಿಮಾ ಹೀರೋಗಳು ನಿಮ್ಮ ಅದರ್ಶವಲ್ಲ ಬದಲಿಗೆ ನೀವೇ ಹೀರೋಗಳಾಗಿ ಸಾಧನೆ ಮಾಡಿ ಎಂದರು. ಶ್ರೀದೇವಿ ಇಂಜಿನಿಯರಿಂಗ್ ಕಾಲೇಜುನ್ನು ರಾಜ್ಯದ ಮಾದರಿ ಕಾಲೇಜನ್ನಾಗಿ ಪರಿವರ್ತಿಸುವಲ್ಲಿ, ರೂಪಿಸುವಲ್ಲಿ ಡಾ.ಎಂ.ಆರ್.ಹುಲಿನಾಯ್ಕರ್ ಪ್ರಯತ್ನಕ್ಕೆ ಮೆಚ್ಚುಗೆ ವ್ಯಕ್ತಪಡಿಸಿ, ತುಮಕೂರು ಸುತ್ತಮುತ್ತಲಿನ ಭಾಗದಲ್ಲಿ ಗುಣಮಟ್ಟದ ಶಿಕ್ಷಣಕ್ಕೆ ಹೆಸರುವಾಸಿಯಾಗಿದೆ ಎಂದರು.

ಕಾರ್ಯಕ್ರಮದ ಗೌರವ ಅತಿಥಿಗಳಾಗಿ ಗ್ರೀನ್‌ವೇ ಹೆಲ್ತ್ ಇಂಡಿಯಾ ಪ್ರೈವೇಟ್ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕರಾದ ಎನ್.ಎಲ್. ಎಸ್.ಮೂರ್ತಿರವರು ಮಾತನಾಡುತ್ತಾ ಹೆಚ್ಚಿನ ಕೌಶಲ್ಯ ಬೆಳೆಸಿಕೊಂಡರೆ ಕೃತಕ ಬುದ್ಧಿಮತ್ತೆಯಿಂದ ಪಾರಾಗಿ ಹೆಚ್ಚಿನ ಉದ್ಯೋಗಾವಕಾಶಗಳನ್ನು ತಮ್ಮದಾಗಿಸಿಕೊಳ್ಳಬಹುದಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಮುಖ್ಯಅತಿಥಿಗಳಾಗಿ ಆಗಮಿಸಿದ್ದ ಜಾಗತಿಕ ತಂತ್ರಜ್ಞಾನ ಮತ್ತು ಸ್ವತಂತ್ರ ನಿರ್ದೇಶಕರು ಮತ್ತು ಮುಖ್ಯಸ್ಥರಾದ ಸಿ.ಎನ್.ಮಹಾಂತೇಶ್‌ರವರು ಮಾತನಾಡುತ್ತಾ ಯುವ ಜನಾಂಗ ಹೊಸ ಚಿಂತನೆಗೆ ಹೆಚ್ಚಿನ ಒತ್ತು ಕೊಡಬೇಕು. ಪ್ರತಿ ಮೂರು ಮತ್ತು ಆರು ತಿಂಗಳಿಗೊಮ್ಮೆ ಹೊಸ ಹೊಸ ಆವಿಷ್ಕಾರಗಳ ಬಗ್ಗೆ ಚಿಂತನೆ ಮಾಡುವ ಮತ್ತು ಹೊಸದನ್ನು ಕಲಿಯುವ ಸಾಮರ್ಥ್ಯವನ್ನು ವೃದ್ಧಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಅಧ್ಯಕ್ಷರಾದ ಡಾ.ಎಂ.ಆರ್.ಹುಲಿನಾಯ್ಕರ್‌ರವರು ಮಾತನಾಡುತ್ತಾ ತಾಂತ್ರಿಕ ಶಿಕ್ಷಣದಲ್ಲಿ ವಿಶ್ವೇಶ್ವರಯ್ಯ ವಿಶ್ವವಿದ್ಯಾಲಯ ಅತ್ಯುತ್ತಮ ಕೆಲಸ ಮಾಡಿದೆ. ಮಾಡುತ್ತಲೂ ಇದೆ. ಅದರ ಪಠ್ಯಕ್ರಮಕ್ಕೆ ಅಂತಾರಾಷ್ಟ್ರೀಯ ಮಾನ್ಯತೆ, ಬೇಡಿಕೆ ಹೆಚ್ಚಾಗುತ್ತಿರುವುದು ತಾಂತ್ರಿಕ ಶಿಕ್ಷಣದಲ್ಲಿ ದೇಶದ ಸಾಧನೆ ಬೇರೆಯವರಿಗೆ ಮಾದರಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಟ್ರಸ್ಟಿಯಾದ ಶ್ರೀಮತಿ. ಅಂಬಿಕಾ ಎಂ ಹುಲಿನಾಯ್ಕರ್‌ರವರು ಮಾತನಾಡುತ್ತಾ ಕಾಲೇಜಿನಲ್ಲಿ ಕಲಿಯುವ ವಿದ್ಯಾಭ್ಯಾಸ ಒಂದು ಭಾಗವಾದರೆ ಅನಿಶ್ಚಿತ ಪರಿಸ್ಥಿತಿ ಎದುರಿಸುವಂತಹ ಶಕ್ತಿಯನ್ನು ರೂಡಿಸಿಕೊಳ್ಳಬೇಕು. ಹೊಸದನ್ನು ಕಲಿಯುವ ಪ್ರಯತ್ನ ಮಾಡಿದರೆ ಭವಿಷ್ಯಕ್ಕೆ ಹೆದರುವ ಪರಿಸ್ಥಿತಿ ಬರುವುದಿಲ್ಲ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಶ್ರೀದೇವಿ ಸಂಸ್ಥೆಯ ಮಾನವ ಸಂಪನ್ಮೂಲ ಮತ್ತು ಮಾಹಿತಿ ತಂತ್ರಜ್ಞಾನ ನಿರ್ದೇಶಕರಾದ ಎಂ.ಎಸ್.ಪಾಟೀಲ್‌ರವರು ಮಾತನಾಡುತ್ತಾ ತಂತ್ರಜ್ಞಾನ ವಿಕಾಸವಾದಂತೆ ಉದ್ಯೋಗ ಕಡಿಮೆಯಾಗುತ್ತದೆ. ಎಂಬ ಆತಂಕ ಸಹಜ. ಆದರೆ ಇದರಲ್ಲಿ ಸತ್ಯಾಂಶವಿಲ್ಲ ಎಂದು ಹಲವು ಉದಾಹರಣೆಗಳನ್ನು ಬಿಡಿಸಿ ಹೇಳಿದರು.

ಕಾರ್ಯಕ್ರಮದಲ್ಲಿ ಶ್ರೀದೇವಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರಾದ ಡಾ.ನರೇಂದ್ರ ವಿಶ್ವನಾಥ್‌ರವರು ಸ್ವಾಗತಿಸಿ ವಾರ್ಷಿಕ ವರದಿಯನ್ನು ಮಂಡಿಸಿದರು. ಕಾರ್ಯಕ್ರಮದಲ್ಲಿ ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಗೌರವಾನ್ವಿತ ಕುಲಪತಿಯಾದ ಪ್ರೊ.ವಿದ್ಯಾಶಂಕರ್.ಎಸ್. ಗ್ರೀನ್‌ವೇ ಹೆಲ್ತ್ ಇಂಡಿಯಾ ಪ್ರೈವೇಟ್ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕರಾದ ಎನ್.ಎಲ್.ಎಸ್. ಮೂರ್ತಿ, ಜಾಗತಿಕ ತಂತ್ರಜ್ಞಾನ ಮತ್ತು ಸ್ವತಂತ್ರ ನಿರ್ದೇಶಕರು ಮತ್ತು ಮುಖ್ಯಸ್ಥರಾದ ಸಿ.ಎನ್.ಮಹಾಂತೇಶ್‌ರವರಿಗೆ ಸನ್ಮಾನಿಸಿ ಗೌರವಿಸಲಾಗಿತ್ತು.

ಇದೇ ಸಂದರ್ಭದಲ್ಲಿ ಶ್ರೀದೇವಿ ಸಮೂಹ ಶಿಕ್ಷಣ ಸಂಸ್ಥೆಯ ನಿರ್ದೇಶಕ ಹಾಗೂ ಟ್ರಸ್ಟಿಯಾದ ಡಾ.ರಮಣ್ ಹುಲಿನಾಯ್ಕರ್, ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಟ್ರಸ್ಟಿಯಾದ ಹಾಗೂ ಶ್ರೀದೇವಿ ಆಸ್ಪತ್ರೆಯ ನೇತ್ರತಜ್ಞರಾದ ಡಾ.ಲಾವಣ್ಯ, ಶ್ರೀದೇವಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರಾದ ಡಾ.ನರೇಂದ್ರ ವಿಶ್ವನಾಥ್, ಉಪಪ್ರಾಂಶುಪಾಲರಾದ ಡಾ.ಎನ್.ಚಂದ್ರಶೇಖರ್, ಕಾರ್ಯಕ್ರಮದ ಶ್ರೀಉತ್ಸವದ ಮುಖ್ಯಸಂಯೋಜಕರಾದ ಡಾ.ಕಿರಣ್.ಜಿ.ಎಂ.ರವರು ಭಾಗವಹಿಸಲಿದ್ದಾರೆ.

ಪ್ರೀತಿಯ ನೆಚ್ಚಿನ ಓದುಗ ಮಿತ್ರರೇ ಸೂರ್ಯಪ್ರಗತಿ ಕನ್ನಡ ದಿನಪತ್ರಿಕೆಯ ಸುದ್ದಿಗಳನ್ನ ಅಂತರ್ಜಾಲ ತಾಣ ವೆಬ್ ಆವೃತ್ತಿ https://suryapragathi.com ನಲ್ಲಿ ಹಾಗೂ https://epaper.suryapragathi.com ನಲ್ಲಿ ಓದಬಹುದು – ನೋಡಬಹುದು ಹೆಚ್ಚಿನ ಮಾಹಿತಿಗಾಗಿ 9901010109

